ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1569
ಸದಸ್ಯರ ಹೆಸರು : ಶ್ರೀ ಆರ್.ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 20.03.2020
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು;	ಪ್ರಸ್ತುತ ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ:6018
(ಆ)	ಶಿವಮೊಗ್ಗ ಜಿಲ್ಲೆ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಪಿಡಿಓಗಳು ಇದ್ದಾರೆಯೇ;	ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು 271 ಗ್ರಾಮ ಪಂಚಾಯತಿಗಳಿದ್ದು, 218 ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, 53 ಗ್ರಾಮ ಪಂಚಾಯತಿಗಳಲ್ಲಿ ಹುದ್ದೆಗಳು ಖಾಲಿ ಇರುತ್ತವೆ. ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನಲ್ಲಿ ಒಟ್ಟು 47 ಗ್ರಾಮ ಪಂಚಾಯತಿಗಳಿದ್ದು, 37 ಗ್ರಾಮ ಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, 10 ಗ್ರಾಮ ಪಂಚಾಯತಿಗಳಲ್ಲಿ ಹುದ್ದೆಗಳು ಖಾಲಿ ಇರುತ್ತವೆ. ಚನ್ನಗಿರಿ ತಾಲ್ಲೂಕಿನಲ್ಲಿ ಒಟ್ಟು 61 ಗ್ರಾಮ ಪಂಚಾಯತಿಗಳಿದ್ದು, 56 ಗ್ರಾಮ ಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, 5 ಗ್ರಾಮ ಪಂಚಾಯತಿಗಳಲ್ಲಿ ಹುದ್ದೆಗಳು ಖಾಲಿ ಇರುತ್ತವೆ.
(ಇ)	ಪಿಡಿಓಗಳು ಇಲ್ಲದಿದ್ದಲ್ಲಿ, ಎಷ್ಟು ಪಿಡಿಓಗಳ ಕೊರತೆಯಾಗಿದೆ; ಈ ಕೊರತೆಯನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ;	ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳು ಖಾಲಿ ಇರುವ ಗ್ರಾಮ ಪಂಚಾಯತಿಗಳಿಗೆ ಅಕ್ಕಪಕ್ಕದ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಿ ಕಾರ್ಯನಿರ್ವಹಿಸಲಾಗುತ್ತಿದೆ. ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರು ನೇಮಕಾತಿ ಪ್ರಾಧಿಕಾರವಾಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಸರ್ಕಾರದಿಂದ ಈಗಾಗಲೇ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

(ಈ)	ಸದರಿ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಸಿಬ್ಬಂದಿಗಳೆಷ್ಟು; (ಬಿಲ್ ಕಲೆಕ್ಟರ್, ನಿರು ವಿತರಕ, ವಾಲ್ ಮ್ಯಾನ್, ಜವಾನ, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾಗಾರ ಇತರೆ ಸಿಬ್ಬಂದಿಗಳ ವಿವರವಾದ ಮಾಹಿತಿ ನೀಡುವುದು)	ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು 271 ಗ್ರಾಮ ಪಂಚಾಯತಿಗಳಿದ್ದು, ಬಿಲ್ ಕಲೆಕ್ಟರ್ ವೃಂದದಲ್ಲಿ 219, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ 256, ವಾಟರ್‌ಮೆನ್ ವೃಂದದಲ್ಲಿ 1112, ಜವಾನ ವೃಂದದಲ್ಲಿ 209 ಮತ್ತು ಸ್ವಚ್ಛತಾಗಾರ ವೃಂದದಲ್ಲಿ 40 ಸಿಬ್ಬಂದಿಗಳು ಸೇರಿದಂತೆ ಒಟ್ಟು 1836 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಹೊನ್ನಾಳಿ ತಾಲ್ಲೂಕಿನಲ್ಲಿ 47 ಗ್ರಾಮ ಪಂಚಾಯತಿಗಳಿದ್ದು, ಬಿಲ್‌ಕಲೆಕ್ಟರ್ ವೃಂದದಲ್ಲಿ 29, ವಾಟರ್ ಮೆನ್ ವೃಂದದಲ್ಲಿ 146, ಜವಾನ ವೃಂದದಲ್ಲಿ 46, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ 47, ಸ್ವಚ್ಛತಾಗಾರ ವೃಂದದಲ್ಲಿ 9 ನೌಕರರು ಸೇರಿದಂತೆ ಒಟ್ಟು-314 ಸಿಬ್ಬಂದಿಗಳು ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ 61 ಗ್ರಾಮ ಪಂಚಾಯತಿಗಳಿದ್ದು, ಬಿಲ್ ಕಲೆಕ್ಟರ್ ವೃಂದದಲ್ಲಿ 51, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ 60, ವಾಟರ್ ಮೆನ್ ವೃಂದದಲ್ಲಿ 272 ಮತ್ತು ಜವಾನ ವೃಂದದಲ್ಲಿ 50 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.
(ಉ)	ಜಿಲ್ಲಾ ಪಂಚಾಯತಿಯಿಂದ ಅನುಮೋದನೆಯಾಗಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಹಾಗೂ ಅನುಮೋದನೆಗೊಳ್ಳದೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;	ಶಿವಮೊಗ್ಗ ಜಿಲ್ಲೆಯಲ್ಲಿ 983 ಸಿಬ್ಬಂದಿಗಳ ಅನುಮೋದನೆಯಾಗಿದ್ದು, 853 ಸಿಬ್ಬಂದಿಗಳ ಅನುಮೋದನೆ ಬಾಕಿ ಇರುತ್ತದೆ. ಹೊನ್ನಾಳಿ ತಾಲ್ಲೂಕಿನಲ್ಲಿ 47 ಗ್ರಾಮ ಪಂಚಾಯತಿಗಳ ಪೈಕಿ 314 ಸಿಬ್ಬಂದಿಗಳು ಅನುಮೋದನೆಗೊಂಡಿರುತ್ತಾರೆ. 73 ಸಿಬ್ಬಂದಿಗಳ ಅನುಮೋದನೆ ಬಾಕಿ ಇರುತ್ತದೆ. ಚನ್ನಗಿರಿ ತಾಲ್ಲೂಕಿನಲ್ಲಿ 61 ಗ್ರಾಮ ಪಂಚಾಯತಿಗಳಿದ್ದು, ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆಗೊಂಡ ಒಟ್ಟು ಸಿಬ್ಬಂದಿಗಳ ಸಂಖ್ಯೆ: 320, ಅನುಮೋದನೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ 113.
(ಊ)	ಬಾಕಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಅನುಮೋದನೆ ನೀಡಿ ಆದೇಶ ಹೊರಡಿಸಲಾಗುವುದು? (ಮಾಹಿತಿ ನೀಡುವುದು)	ಗ್ರಾಮ ಪಂಚಾಯತಿಗಳಿಂದ ಸಿಬ್ಬಂದಿ ನೇಮಕಾತಿ ಅನುಮೋದನೆಗೆ ಸಲ್ಲಿಸಲಾದ ಪ್ರಸ್ತಾವನೆಗಳನ್ನು ಕಾಲಕಾಲಕ್ಕೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ ನಿಯಮಾನುಸಾರ ಅನುಮೋದನೆ ನೀಡಲು ಕ್ರಮ ಕೈಗೊಳ್ಳುತ್ತಿರುತ್ತಾರೆ.

ಸಂ. ಗ್ರಾಅಪ 307 ಗ್ರಾಪಂಅ 2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು